ಕರ್ನಾಟಕ ಸರ್ಕಾರ

ಸೆಪ್ಟೆಂಬರ್ 4, 2017

# ತೋಟಗಾರಿಕಾ ಇಲಾಖೆಯಲ್ಲೂ ಕೃಷಿ ಭಾಗ್ಯ ಯೋಜನೆಯ ಅನುಷ್ಠಾನಕ್ಕೆ ಸಂಪುಟ ತೀರ್ಮಾನ : ಟಿ ಬಿ ಜಯಚಂದ್ರ

ಬೆಂಗಳೂರು, ಸೆಪ್ಟೆಂಬರ್ 4:

ರಾಜ್ಯದ ಆಯವ್ಯಯದಲ್ಲಿ ಘೋಷಿಸಿರುವಂತೆ ತೋಟಗಾರಿಕಾ ಇಲಾಖೆಯಲ್ಲೂ ಕೃಷಿ ಭಾಗ್ಯ ಯೋಜನೆಯನ್ನು ಅನುಷ್ಠಾನಗೊಳಿಸಲು ರಾಜ್ಯ ಸಚಿವ ಸಂಪುಟವು ತೀರ್ಮಾನಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆಯ ನಂತರ ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ ಅವರು ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದರು.

ಕೃಷಿ ಇಲಾಖೆಯ ಕೃಷಿ ಭಾಗ್ಯ ಯೋಜನೆಯ ಮಾದರಿಯಲ್ಲಿಯೇ ತೋಟಗಾರಿಕಾ ಇಲಾಖೆಯು ರಾಜ್ಯದ 25 ಜಿಲ್ಲೆಗಳ 128 ತಾಲ್ಲೂಕುಗಳಲ್ಲಿ ತೋಟಗಾರಿಕಾ ಬೆಳೆಗಳಾದ ಹಣ್ಣು ತರಕಾರಿಗಳನ್ನು ಪಾಲಿ ಹೌಸ್‌ಗಳಲ್ಲಿ ಬೆಳೆಸಲು ಅನುವಾಗುವಂತೆ ಸಹಯಾಧನ ನೀಡುವ ಯೋಜನೆಗೆ ಸಂಪುಟ ಒಪ್ಪಿಗೆ ನೀಡಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರು ಪಾಲಿ ಹೌಸ್ ನಿರ್ಮಿಸಿದರೆ ಶೇಕಡಾ 90 ರಷ್ಟು ಧನಸಹಾಯ ಹಾಗೂ ಇತರೆ ವರ್ಗದವರಿಗೆ ಶೇಕಡಾ 50 ರಷ್ಟು ಧನ ಸಹಾಯ ನೀಡುವ ಈ ಯೋಜನೆಗೆ ಪ್ರಸಕ್ತ ಸಾಲಿನಲ್ಲಿ 200 ಕೋಟಿ ರೂ ಅನುದಾನವನ್ನು ಮೀಸಲಿರಿಸಲು ಸಂಪುಟ ನಿರ್ಧರಿಸಿದೆ ಎಂದು ಸಚಿವರು ಹೇಳಿದರು.

## ಕೃಷಿಯಂತ್ರಧಾರೆ

ರಾಜ್ಯದ 743 ಹೋಬಳಿಗಳ ಪೈಕಿ ಈಗಾಗಲೇ ಸುಮಾರು 500 ಹೋಬಳಿಗಳಲ್ಲಿ ಕೃಷಿ ಯಂತ್ರಧಾರೆ ಯೋಜನೆಯು ಅನುಷ್ಠಾನಗೊಂಡಿದೆ.

ಉಳಿದ ಸುಮಾರು 250 ಹೋಬಳಿಗಳಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ನೆರವಾಗುವ ಯಂತ್ರೋಪಕರಣಗಳನ್ನು ಕಡಿಮೆ ದರದಲ್ಲಿ ಬಾಡಿಗೆ ರೂಪದಲ್ಲಿ ನೀಡಿ ಕೃಷಿ ಚಟುವಟಿಕೆಗಳನ್ನು ವಿಸ್ತರಿಸುವ ಕೃಷಿ ಯಂತ್ರಧಾರೆ ಯೋಜನೆಗೆ ವಿಶೇಷ ಸವಲತ್ತುಗಳನ್ನು ನೀಡಲು ಸಂಪುಟ ಸಮ್ಮತಿಸಿದೆ.

ಹತ್ತು ಲಕ್ಷ ರೂ ಒಳಗಿನ ವಾರ್ಷಿಕ ವಹಿವಾಟು ನಡೆಸುವ ಘಟಕಕ್ಕೆ ಸರ್ಕಾರದಿಂದ ಐದು ಲಕ್ಷ ರೂ ಸಹಾಯ ಧನ ಹಾಗೂ ಹೊಸದಾಗಿ ಯಂತ್ರೋಪಕರಗಳನ್ನು ಖರೀಸಲೂ ಕೂಡಾ ಅಗತ್ಯ ಆರ್ಥಿಕ ನೆರವನ್ನು ಒದಗಿಸಲು ಸಂಪಟ ತೀರ್ಮಾನಿಸಿದೆ.

ಅಂತೆಯೇ, ಹತ್ತು ಲಕ್ಷ ರೂಗಳಿಗಿಂತಲೂ ಕಡಿಮೆ ವಾರ್ಷಿಕ ವಹಿವಾಟು ನಡೆಸಿದ ಘಟಕಕ್ಕೆ ಎರಡೂವರೆ ಲಕ್ಷ ರೂ ಸಹಾಯಧನ ನೀಡಲು ಸಂಪುಟ ಒಪ್ಪಿಗೆ ನೀಡಿದೆ. ಈ ಯೋಜನೆಗೆ ಒಟ್ಟು 122 ಕೋಟಿ ರೂ ಮೊತ್ತವನ್ನು ಮೀಸಲಿರಿಸಲಾಗಿದೆ ಎಂದು ಜಯಚಂದ್ರ ಅವರು ಹೇಳಿದರು.

## ಮುಖ್ಯಮಂತ್ರಿಯವರ ಮೂಲಸೌಕರ್ಯ ಯೋಜನೆ

ಪ್ರಸಕ್ತ ಸಾಲಿನ ಆಯವ್ಯಯಲ್ಲಿ ಪ್ರಕಟಿಸಿದಂತೆ ಮುಖ್ಯಮಂತ್ರಿಯವರ ಮೂಲಸೌಕರ್ಯ ನೀರುಗಾಲುವೆ ಕಾಮಗಾರಿಗಳು ಹಾಗೂ ತುರ್ತು ಕಾಮಗಾರಿಗಳಿಗೆ ಸಂಪುಟವು ಅನುಮೋದನೆ ನೀಡಿದೆ. ಈ ಯೋಜನೆಯಡಿ ಬೆಂಗಳೂರು ಮಹಾ ನಗರದಲ್ಲಿ ಇತ್ತೀಚೆಗೆ ಸುರಿದ ಭಾರೀ ಮಳೆಯಿಂದ ಹಾನಿಗೊಳಗಾಗಿರುವ 842 ಕಿ ಮೀ ಪ್ರದೇಶದಲ್ಲಿ ಕಾಮಗಾರಿಗಳ ಅನುಷ್ಠಾನಕ್ಕೆ 300 ಕೋಟಿ ರೂ ಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ.

## ಕರಾವಳಿ ಜಿಲ್ಲೆಗಳಿಗೆ ಪ್ರತ್ಯೇಕ ಮರಳು ನೀತಿ

ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಪ್ರತ್ಯೇಕ ಮರಳು ನೀತಿ ಜಾರಿಗೆ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ. ಕಾನೂನು ಸಚಿವರ ಅಧ್ಯಕ್ಷತೆಯಲ್ಲಿ ರಚಿಸಲಾದ ಸಂಪುಟ ಉಪ ಸಮಿತಿಯ ಶಿಫಾರಸ್ಸುಗಳನ್ನು ಸಂಪುಟ ಅಂಗೀಕರಿಸಿದೆ.

ಕರಾವಳಿಯಲ್ಲಿ ಕರಾವಳಿ ನಿಯಂತ್ರಣಾ ವಲಯ ಹಾಗೂ ಕರಾವಳಿ ನಿಯಂತ್ರಣೇತರ ವಲಯದಲ್ಲಿ ಮರಳು ಗಣಿಗಾರಿಕೆಗೆ ಅನುಮತಿ ನೀಡುವ ಬಗ್ಗೆ ಸಂಪುಟವು ಪರಾಮರ್ಶಿಸಿ ಕರಾವಳಿ ನಿಯಂತ್ರಣೇತರ ವಲಯದಲ್ಲಿ ಸಾಂಪ್ರದಾಯಕ ಮರಳು ಗಣಿಗಾರಿಕೆಗೆ ಅನುಮತಿ ನೀಡಿದೆ. ಈ ಪ್ರದೇಶದಲ್ಲಿ ಬೃಹತ್ ಯಂತ್ರಗಳನ್ನು ಬಳಸಿ ಮರಳು ಗಣಿಗಾರಿಕೆಗೆ ನಿಷೇಧ ಹೇರಲು ಹಾಗೂ ಕರಾವಳಿ ನಿಯಂತ್ರಣೇತರ ವಲಯದಲ್ಲಿ ಮರಳು ಗಣಿಗಾರಿಕೆಗೆ ಅನುಮತಿ ನೀಡುವ ಅಧಿಕಾರವನ್ನು ತಹಸೀಲ್ದಾರ್ ಅವರಿಗೆ ನೀಡಲು ಸಂಪುಟ ನಿರ್ಧರಿಸಿದೆ.

## ನಮ್ಮ ಮೆಟ್ರೋ ಎರಡನೇ ಹಂತ ಭೂಸ್ವಾಧೀನಕ್ಕೆ 6293 ಕೋಟಿ ರೂ ಮಂಜೂರು

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತದ ನಮ್ಮ ಮೆಟ್ರೋ ಎರಡನೇ ಹಂತ ಯೋಜನೆಯ ಭೂಸ್ವಾಧೀನಕ್ಕೆ ಹೆಚ್ಚುವರಿಯಾಗಿ 2187.46 ಕೋಟಿ ಸೇರಿದಂತೆ ಒಟ್ಟಾರೆ 6293 ಕೋಟಿ ರೂ ಮೊತ್ತಕ್ಕೆ ಸಂಪುಟ ಮಂಜೂರಾತಿ ನೀಡಿದೆ.

## ಕಬ್ಬಿಣಾಂಶ ಮಾತ್ರೆ ಖರೀದಿಗೆ 10.4 ಕೋಟಿ ರೂ, ಸ್ಯಾನಿಟರಿ ನ್ಯಾಪ್‌ಕಿನ್‌ಗೆ 47.96 ಕೋಟಿ ರೂ

ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಯೋಜನೆ ಹಾಗೂ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಯೋಜನೆ ಕಾರ್ಯಕ್ರಮಗಳಡಿ ಕಬ್ಬಿಣಾಂಶವುಳ್ಳ ಮಾತ್ರೆಗಳನ್ನು 10.4 ಕೋಟಿ ರೂ ವೆಚ್ಚದಲ್ಲಿ ಹಾಗೂ ಬಾಲಕಿಯರಿಗೆ ಸ್ಯಾನಿಟರಿ ನ್ಯಾಪ್‌ಕಿನ್‌ಗಳನ್ನು 47.96 ಕೋಟಿ ರೂ ವೆಚ್ಚದಲ್ಲಿ ಖರೀದಿಸಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

## ಬಳಕೆಯಾಗದ ಕಾನೂನುಗಳ ನಿರಶನ

ಕಳೆದ ಹಲವಾರು ವರ್ಷಗಳಿಂದ ಬಳಕೆಯಾಗದ ರಾಜ್ಯದ 135 ಕಾನೂನುಗಳು ಹಾಗೂ ಕೇಂದ್ರ ಸರ್ಕಾರದ ಎಂಟು ಕಾನೂನುಗಳನ್ನು ನಿರಸನಗೊಳಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ಪಟ್ಟಣದಲ್ಲಿ 13.25 ಕೋಟಿ ರೂ ವೆಚ್ಚದಲ್ಲಿ ಡಾ ಬಿ. ಆರ್. ಅಂಬೇಡ್ಕರ್ ಭವನದ ಪರಿಷ್ಕೃತ ಅಂದಾಜಿಗೆ ಸಂಪುಟವು ಅನುಮೋದನೆ ನೀಡಿದೆ.

ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿನ ಹೇಮಾವತಿ ವಸಾಹತು ಜಕ್ಕನಹಳ್ಳಿಯಲ್ಲಿರುವ 5.16 ಎಕರೆ ಜಾಗವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಕಂದಾಯ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಮಾರ್ಗಸೂಚಿ ದರದಲ್ಲಿ ಹಸ್ತಾಂತರಿಸಲು ಸಂಪುಟ ಒಪ್ಪಿಗೆ ನೀಡಿದೆ.

**ವಸತಿ ಸಮುಚ್ಚಯ ನಿರ್ಮಾಣಕ್ಕೆ ಅನುಮೋದನೆ**

ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಬೋವಿನಾಚನಪಲ್ಲಿ ಮತ್ತು ಪೆದ್ದನಾಚನಪಲ್ಲಿ ಗ್ರಾಮಗಳಲ್ಲಿ 6.88 ಕೋಟಿ ರೂ ವೆಚ್ಚದಲ್ಲಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ಯೋಜನೆಯಡಿ ವಸತಿ ಸಮುಚ್ಚಯವನ್ನು ನಿರ್ಮಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ.

ಅದೇ ರೀತಿ, ಕೋರಮಂಗಲದಿಂದ ಶಿನಿವಾಗಿಲುವರೆಗೆ ತ್ಯಾಜ್ಯ ನೀರು ಶುದ್ಧೀಕರಿಸಿ, ಶುದ್ಧೀಕರಿಸಿದ ನೀರನ್ನು ಬೆಳ್ಳಂದೂರು ಕೆರೆಗೆ ಹರಿಸುವ 12 ಕೋಟಿ ವೆಚ್ಚದ ಮೂರು ವರ್ಷಗಳ ಕ್ರಿಯಾ ಯೋಜನೆಗೆ ಸಂಪುಟ ಒಪ್ಪಿಗೆ ನೀಡಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರಾಜ್ಯ ಸರ್ಕಾರಿ ನೌಕರರ ಬಡ್ತಿ ಮೀಸಲಾತಿ ಕುರಿತ ರಾಜ್ಯ ಸಚಿವ ಸಂಪುಟದ ಶಿಫಾರಸ್ಸಿನ ಬಗ್ಗೆ ರಾಜ್ಯಪಾಲರಿಗೆ ಮನವರಿಕೆ ಮಾಡಿಕೊಡಲಾಗಿದೆ. ರಾಜ್ಯಪಾಲರು ಸುಗ್ರೀವಾಜ್ಞೆಗೆ ಶೀಘ್ರದಲ್ಲೇ ಅಂಕಿತ ಹಾಕುವ ವಿಶ್ವಾಸವಿದೆ.

ರಾಜ್ಯ ಸರ್ಕಾರ ಈಗಾಗಲೇ ಭಾರತ ಸರ್ವೋಚ್ಚ ನ್ಯಾಯಾಲಯದಲ್ಲಿ ಕಾಲಾವಧಿ ವಿಸ್ತರಣಾ ಹಾಗೂ ಮರುಪರಿಶೀಲನಾ ಅರ್ಜಿ ಸಲ್ಲಿಸಿದೆ ಎಂದು ಜಯಚಂದ್ರ ಅವರು ವಿವರಿಸಿದರು.

***************

ಡಿ ಪಿ ಎಂ